ಇ) ಹೌದು

ಈ) ಈ ಅಧಿಕಾರಿಯ ವಿರುದ್ಧ ಮಾಡಲಾಗಿರುವ ದೂರುಗಳ ಬಗ್ಗೆ ವಿವರವಾದ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾಂ ವೃತ್ತ, ಬೆಳಗಾಂ ಇವರಿಗೆ ಸೂಚಿಸಲಾಗಿದೆ

ಉ) ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾಂ ವೃತ್ತ, ಬೆಳಗಾಂ, ಇವರಿಂದ ಈ ಅಧಿಕಾರಿಯ ವಿರುದ್ಧ ಮಾಡಲಾದ ದೂರುಗಳ ಬಗ್ಗೆ ತನಿಖಾ ವರದಿ ಬಂದ ನಂತರ ಇವರನ್ನು ಲೊಂಡಾದಿಂದ ವರ್ಗಾಯಿಸುವ ಬಗ್ಗೆ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲಾಗುವುದು

ಊ) ಮೇಲೆ ಹೇಳಿದ ವಲಯ ಅರಣ್ಯ ಅಧಿಕಾರಿಗಳ ಪೈಕಿ ಲೊಂಡಾ ಹಾಗೂ ಗೋಲಿಹಳ್ಳಿ ಪ್ರಾದೇಶಿಕ ವಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಲಯ ಅರಣ್ಯ ಅಧಿಕಾರಿಗಳು ಮಾತ್ರ ಸದರಿ ವಲಯದಲ್ಲಿ ಎರಡು ವರ್ಷಗಳ ಸೇವೆ ಸಲ್ಲಿಸಿದ್ದು, ಉಳಿದ ವಲಯ ಅರಣ್ಯ ಅಧಿಕಾರಿಗಳು ಕೇವಲ ಒಂದು ವರ್ಷ ಮಾತ್ರ ಸೇವೆ ಸಲ್ಲಿಸಿರುತ್ತಾರೆ ಸರ್ಕಾರದ ವರ್ಗಾವಣೆ ಮಾರ್ಗಸೂಚಿ ದಿನಾಂಕ 22 11 2001ರ ಪ್ರಕಾರ ವಲಯ ಅರಣ್ಯ ಅಧಿಕಾರಿಗಳನ್ನು ಕನಿಷ್ಠ ಎರಡು ವರ್ಷಗಳವರೆಗೆ ಒಂದು ಹುದ್ದೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಕಲ್ಪಿಸಬೇಕಾಗಿರುತ್ತದೆ 2007–08ನೇ ಸಾಲಿನಲ್ಲಿ ಸಾರ್ವತ್ರಿಕ ವರ್ಗಾವಣೆಗಳನ್ನು ನಿಷೇಧಿಸಿರುವುದರಿಂದ ಈ ಸಾಲಿನಲ್ಲಿ ವಲಯ ಅರಣ್ಯ ಅಧಿಕಾರಿಗಳ ವರ್ಗಾವಣೆ ಬಗ್ಗೆ ಪರಿಶೀಲಿಸಲು ಸಾಧ್ಯವಾಗಿರುವುದಿಲ್ಲ ಅಧಿಕಾರಿಗಳ ವಿರುದ್ಧ ಗುರುತರವಾದ ಆರೋಪಗಳಿದ್ದಲ್ಲಿ ಅದನ್ನು ಮೇಲಧಿಕಾರಿಗಳಿಂದ ಪ್ರಾದಮಿಕ ತನಿಖೆ ನಡೆಸಿ ಒಂದು ವೇಳೆ ಆರೋಪಗಳು ಮೇಲ್ನೋಟಕ್ಕೆ ಸಾಬೀತಾದಲ್ಲಿ ಅಂತಹವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲು ಹಾಗೂ ಬೇರೆ ಕಡೆಗೆ ವರ್ಗಾಯಿಸಲು ನಿಯಮಗಳಲ್ಲಿ ಅವಕಾಶವಿದೆ ಆದ್ದರಿಂದ, ಮೇಲಿನ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾಂ ವೃತ್ತ, ಬೆಳಗಾಂ ಇವರಿಗೆ ಸೂಚಿಸಿದ್ದು ಅವರಿಂದ ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು

791(724) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಘನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಶಿವಮೊಗ್ಗ ಜಿಲ್ಲೆಯಲ್ಲಿ ವಿದರ್ಭ ಪ್ಯಾಕೇಜ್‌ನಡಿಯಲ್ಲಿ ವಿತರಣೆಯಾದ ಹಣದ ಮೊತ್ತವೆಷ್ಟು, (ವಿವರ ನೀಡುವುದು)

ಆ) ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಗೆ ಬರುವ ಜಿಲ್ಲೆಯ ಕೆರೆಗಳಲ್ಲಿ ಹೂಳು ಎತ್ತಲು ಹಾಗೂ ಅವುಗಳ ಅಭಿವೃದ್ಧಿಗೆ ಸರ್ಕಾರ ವೆಚ್ಚ ಮಾಡಿದ ಹಣವೆಷ್ಟು?

ಶ್ರೀ ಬಿ ಎಸ್ ಯಡಿಯೂರಪ್ಪ (ಮಾನ್ಯ ಉಪ ಮುಖ್ಯಮಂತ್ರಿಗಳು)

ಅ) ರೂ 11,423 61 ಲಕ್ಷ ರೂ ಗಳ ಅಂದಾಜುಗಳ ಕಾಮಗಾರಿಗಳನ್ನು ನಬಾರ್ಡ್ ಸಾಲಸೌಲಭ್ಯ ಪಡೆದು ಕೈಗೊಳ್ಳಲು ಯೋಜಿಸಿದೆ ವಿವರಗಳನ್ನು ಅನುಬಂಧದಲ್ಲಿ ನೀಡಿದೆ

ಆ) ಶಿವಮೊಗ್ಗ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೆರೆಗಳಲ್ಲಿ ಹೊಳೆತ್ತಲು ಮತ್ತು ಅಭಿವೃದ್ಧಿಗಾಗಿ 2006–07ನೇ ಸಾಲಿನಲ್ಲಿ 37 ಕೆರೆಗಳನ್ನು ಕೈಗೆತ್ತಿಕೊಂಡು ಮಾರ್ಚ್ 2007ರ ರವರೆಗೆ ರೂ 574 42 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ

ಅನುಬಂಧ – I

ಶಿವಮೊಗ್ಗ ಜಿಲ್ಲೆಯಲ್ಲಿ ವಿದರ್ಭ ಪ್ಯಾಕೇಜ್‌ನಡಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಪ್ರಸ್ತಾಪಿಸಲ್ಪಟ್ಟಿರುವ ಕ್ಷೇತ್ರವಾರು ಪಟ್ಟಿ

ಕ್ರ ಸಂ	ವಿಧಾನಸಭಾ ಕ್ಷೇತ್ರ	ಕಾಮಗಾರಿ ಸಂಖ್ಯೆ	ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ)
1	ವಿಧಾನಸಭಾ ಕ್ಷೇತ್ರ	12	1199 00
2	ಹೊಸನಗರ	21	777 00
3	ಭದ್ರಾವತಿ	13	296 00
4	ಹೊಳೆಹೊನ್ನೂರು	4	80 00
5	ತೀರ್ಥಹಳ್ಳಿ	11	611 70
6	ಸಾಗರ	34	1454 91
7	ಸೊರಬ	38	3840 00
8	ಶಿಕಾರಿಪುರ	72	3165 00
	ಒಟ್ಟು	**205**	**11423 61**

792(725) ಶ್ರೀ ಹಾಲಪ್ಪ ಹೆಚ್ (ಹೊಸನಗರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಶಿವಮೊಗ್ಗ ತಾಲ್ಲೂಕು ತಾವರೆಕೆರೆ ಸಿಂಹಧಾಮ ಸರ್ವತೋಮುಖ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು

ಆ) ಕಳೆದ ಮೂರು ವರ್ಷಗಳಲ್ಲಿ ತಾವರೆಕೆರೆ ಸಿಂಹಧಾಮ ಅಭಿವೃದ್ಧಿಗಾಗಿ ಸರ್ಕಾರ ಖರ್ಚು ಮಾಡಿರುವ ಮೊತ್ತವೆಷ್ಟು (ಮೂರು ವರ್ಷದ ವಿವರ ನೀಡುವುದು)

ಇ) ಈ ಸಿಂಹಧಾಮ ಅಭಿವೃದ್ಧಿಗೆ ಯೋಜನೆ ಮತ್ತು ಅಂದಾಜು ವೆಚ್ಚವೆಷ್ಟು?

ಶ್ರೀ ಸಿ ಚೆನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)